RA No.68/2024
CW-1 ಬಾಪ್ಪೂ ಗೌಡ
Date: 04.12.2025

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು ಎದುರುದಾರರ ಪರ ಶ್ರೀ ಕೆ ಬಿ ಪಿ ವಕೀಲರಿಂದಃ**

ನನ್ನ ತಾಯಿ 1ನೇ ಎದುರುದಾರರಿಗೆ ಈಗ 68 ವರುಷ ವಯಸ್ಸಾಗಿದೆ. ಅಸಲು ದಾವೆಯಲ್ಲಿ ನಾನು ಮತ್ತು ಉಳಿದ ಅಪೀಲುದಾರರು ಎಲ್ಲರೂ ನ್ಯಾಯಾಲಯಕ್ಕೆ ಓಡಾಡುತ್ತಿದ್ದೇವೆ ಎಂದರೆ ಸರಿ. ಸದರಿ ದಾವೆಯಲ್ಲಿ ತೀರ್ಪು ಆಗುವವರೆಗೂ ನಾವುಗಳು ನ್ಯಾಯಾಲಯಕ್ಕೆ ಓಡಾಡುತ್ತಿದ್ದೆವು ಎಂದರೆ ಸರಿ. ನನ್ನ ತಾಯಿ ಕೂಡ ಪ್ರತಿ ಮುದ್ದತಿಗೂ ನ್ಯಾಯಾಲಯಕ್ಕೆ ಹಾಜರಾಗುತ್ತಿದ್ದರು ಎಂದರೆ ಸರಿ. ದಿನಾಂಕ 27.02.2023 ರಂದು ಆದ ತೀರ್ಪಿನ ಬಗ್ಗೆ ನಾವು ನಮ್ಮ ವಕೀಲರಿಂದ ಮಾಹಿತಿಯನ್ನು ಪಡೆದಿದ್ದೆವು. ನನ್ನ ತಾಯಿಗೆ ಚಿಕಿತ್ಸೆ ಕೊಡಿಸಿದ ಬಗ್ಗೆ ದಾಖಲಾತಿಗಳನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ನನ್ನ ತಾಯಿಗೆ ಆರೋಗ್ಯ ಸರಿ ಇರದೇ ಇದ್ದ ಕಾರಣ ನಿಗದಿತ ಅವಧಿಯಲ್ಲಿ ಮೇಲ್ಮನವಿಯನ್ನು ನಾವು ಸಲ್ಲಿಸಿಲ್ಲ ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಉದ್ದೇಶ ಪೂರ್ವಕವಾಗಿ ಮೇಲ್ಮನವಿಯನ್ನು ಸಲ್ಲಿಸಲು ವಿಳಂಬ ಮಾಡಿದ್ದೇವೆ ಎಂದರೆ ಸರಿಯಲ್ಲ. ಮೇಲ್ಮನವಿಯನ್ನು ಸಲ್ಲಿಸಲು ಆದ ವಿಳಂಬದ ಬಗ್ಗೆ ಯಾವುದೇ ಸಕಾರಣ ನೀಡಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಳ್ಳಕೆರೆ